## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಸುರೇಶ್, ಸದಸ್ಯರು, ನಗರನಹಳ್ಳಿ ಗ್ರಾಮ ಪಂಚಾಯಿತಿ, ಹೊಳೆನರಸೀಪುರ ತಾಲ್ಲೂಕು, ಹಾಸನ ಜಿಲ್ಲೆ, ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

ಓದಲಾಗಿದೆ:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಹಾಸನ ಇವರ ಪತ್ರ ಸಂಖ್ಯೆ: ಜಿ.ಪಂ/ಪಶಾ/37/2017-18, ದಿನಾಂಕ:23.11.2017.
2. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ1382:ಗ್ರಾಪಂಅ:2017, ದಿನಾಂಕ:02.01.2018ರ ಕಾರಣ ಕೇಳುವ ನೋಟಿಸ್.
3. ಶ್ರೀ ಸುರೇಶ್, ಸದಸ್ಯರು, ನಗರನಹಳ್ಳಿ ಗ್ರಾಮ ಪಂಚಾಯಿತಿ, ಇವರು ಕಾರಣ ಕೇಳುವ ನೋಟಿಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ:05.07.2018.
4. ಇದೇ ಸಮಸಂಖ್ಯೆಯ ವಿಚಾರಣಾ ನೋಟೀಸಿನ ದಿನಾಂಕ: 14.03.2017, 11.06.2018 ಮತ್ತು 11.01.2019. ವಿಚಾರಣೆ ನಡೆದ ದಿನಾಂಕ: 06.04.2018, 29.06.2018 ಮತ್ತು 16.01.2019.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಶ್ರೀ ಸುರೇಶ್, ಸದಸ್ಯರು, ನಗರನಹಳ್ಳಿ ಗ್ರಾಮ ಪಂಚಾಯಿತಿ, ಹೊಳೆನರಸೀಪುರ ತಾಲ್ಲೂಕು, ಹಾಸನ ಜಿಲ್ಲೆ, ಇವರು ದಿನಾಂಕ:03-12-2016, 17-01-2017, 17-02-2017 04-05-2017 ಮತ್ತು 09-08-2017ರಂದು ನಡೆದ ಗ್ರಾಮ ಪಂಚಾಯತಿ ಐದು ಸಾಮಾನ್ಯ ಸಭೆಗಳಿಗೆ ನಿರಂತರವಾಗಿ ಗೈರು ಹಾಜರಾಗಿರುತ್ತಾರೆಂದು ಶ್ರೀ ಸುರೇಶ್, ಸದಸ್ಯರು, ನಗರನಹಳ್ಳಿ ಗ್ರಾಮ ಪಂಚಾಯಿತಿ ರವರ ವಿರುದ್ಧ ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 13ರ ಉಪ ಪ್ರಕರಣ 13(ಸಿ)ಪ್ರಕಾರ ಕ್ರಮ ಕೈಗೊಳ್ಳುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ ಜಿಲ್ಲೆ ರವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಸದರಿ ಪ್ರಕರಣವನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ)ರನ್ವಯ ಪ್ರಕಾರ ಪ್ರಕರಣವನ್ನು ಪರಿಗಣಿಸಲಾಯಿತು.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 ರ ಪ್ರಕರಣ 43-ಎ ರಡಿ ಕ್ರಮವಹಿಸುವ ಪೂರ್ವದಲ್ಲಿ ನಿಯಮಾನುಸಾರ ಕಾರಣ ಕೇಳುವ ನೋಟೀಸನ್ನು ದಿನಾಂಕ:02.01.2018 ರಂದು ಜಾರಿ ಮಾಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ಸದರಿಯವರು ಕಾರಣ ಕೇಳುವ ನೋಟೀಸಿಗೆ ಈ ಕೆಳಕಂಡಂತೆ ಉತ್ತರ ಸಲ್ಲಿಸಿರುತ್ತಾರೆ.

- ನಾನು 2015ನೇ ಸಾಲಿನಲ್ಲಿ ನಗರಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಕಬ್ಬೂರು ಗ್ರಾಮದಲ್ಲಿ ಗ್ರಾಮ ಪಂಚಾಯಿತಿ ಸದಸ್ಯ ಸ್ಥಾನಕ್ಕೆ ಚುನಾಯಿತ ಸದಸ್ಯನಾಗಿರುತ್ತೇನೆ ದಿನಾಂಕ:22.03.2016 ರಂದು ನಮ್ಮ ಊರಿನಲ್ಲಿ ರಾಜಕೀಯ ದ್ವೇಷಕ್ಕಾಗಿ ಗಲಾಟೆಯಾಗಿದ್ದು, ದಿನಾಂಕ:27.09.2016ರಂದು ಹೊಳೆನರಸೀಪುರ ಗ್ರಾಮಾಂತರ ಪೋಲೀಸ್ ಠಾಣೆಯಲ್ಲಿ ಶರಣಾಗಿದ್ದು, ಅಂದಿನಿಂದ ನಾನು 2017ರ ಏಪ್ರಿಲ್ ತಿಂಗಳವರೆಗೆ ಹಾಸನ ಜಿಲ್ಲಾ ಉಪಕಾರಾಗೃಹದಲ್ಲಿ ನ್ಯಾಯಾಂಗ ಬಂಧನದಲ್ಲಿರುತ್ತೇನೆ. ದಿನಾಂಕ: 27.04.2017 ರಂದು ನಮ್ಮ ವಕೀಲರ ಮುಖಾಂತರ ಹೊಳೆನರಸೀಪುರ ನ್ಯಾಯಾಧೀಶರ ನ್ಯಾಯಾಲಯದಲ್ಲಿ ನಗರನಹಳ್ಳಿ ಗ್ರಾಮ ಪಂಚಾಯಿತಿಯ ಸಾಮಾನ್ಯ ಸಭೆಗೆ ಹಾಜರಾಗಲು ಅನುಮತಿ ಕೋರಿ ಅರ್ಜಿ ಸಲ್ಲಿಸಿದ್ದೆ, ಆದರೆ ಮಾನ್ಯ ಹೊಳೆನರಸೀಪುರ ನ್ಯಾಯಾಲಯವು ನನ್ನ ಅರ್ಜಿಯನ್ನು ತಿರಸ್ಕರಿಸಿತ್ತು ಆದುದರಿಂದ ಸಭೆಗಳಿಗೆ ಹಾಜರಾಗಲು ಸಾಧ್ಯವಾಗಿರುವುದಿಲ್ಲ.
- ನಾನು ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಮಧ್ಯಂತರ ಜಾಮೀನು ನೀಡುವಂತೆ ಅರ್ಜಿ ಸಲ್ಲಿಸಲಾಗಿ, 2018ನೇ ಏಪ್ರಿಲ್ ತಿಂಗಳಿನಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ಜಾಮೀನು ಮಂಜೂರು ಮಾಡಿರುತ್ತದೆ. ಅದರ ಜೆರಾಕ್ಸ್ ಪ್ರತಿಯನ್ನು ಈ ಕೂಡ ಲಗತ್ತಿಸಿರುತ್ತೇನೆ ಹಾಗೂ ಮೇಲೆ ಹೇಳಿದ ಎಲ್ಲಾ ಸತ್ಯಾಂಶಗಳಿಗೆ ಅನುಗುಣವಾಗಿ ಅಗತ್ಯ ದಾಖಲಾತಿಗಳ ನಕಲು ಪ್ರತಿಗಳನ್ನು ಲಗತ್ತಿಸಿರುತ್ತೇನೆ. ತಾವುಗಳು ದಯಮಾಡಿ ನಗರನಗಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಕಬ್ಬೂರು ಗ್ರಾಮದ ಚುನಾಯಿತ ಗ್ರಾಮ ಪಂಚಾಯತಿಯ ಸದಸ್ಯನಾದ ನನ್ನ ಗ್ರಾಮ ಪಂಚಾಯಿತಿ ಸದಸ್ಯತ್ವವನ್ನು ಮುಂದುವರೆಸಿಕೊಡಬೇಕೆಂದು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ ಮಾನ್ಯ ಪ್ರಧಾನ ಕಾರ್ಯದರ್ಶಿಯವರ ನ್ಯಾಯಾಲಯದಲ್ಲಿ ದಿನಾಂಕ:06.04.2018 ರಂದು ನಡೆದ ವಿಚಾರಣೆಯಲ್ಲಿ ಆಪಾದಿತ ಸದಸ್ಯರು ಜೈಲಿನಲ್ಲಿ ಇರುವ ಕಾರಣ ಸಮಯ ಕೋರಿರುತ್ತಾರೆ ಎಂದು ಪ್ರಕರಣವನ್ನು ಮುಂದೂಡಿರಲಾಗಿರುತ್ತದೆ. ದಿನಾಂಕ:29.06.2018 ರಂದು ಮಾನ್ಯ ಪ್ರಧಾನ ಕಾರ್ಯದರ್ಶಿಯವರ ನ್ಯಾಯಾಲಯದಲ್ಲಿ ನಡೆದ ವಿಚಾರಣೆಯಲ್ಲಿ ಆಪಾದಿತರು ಜೈಲಿನಲ್ಲಿ ಇರುವ ಕಾರಣ ಒಂದು ವಾರದೊಳಗೆ ಲಿಖಿತ ಹೇಳಿಕೆಯನ್ನು ನೀಡಲು ಕಾಲಾವಕಾಶ ಕೋರಿರುತ್ತಾರೆ. ಸದರಿಯವರಿಗೆ ತಮ್ಮ ಲಿಖಿತ ಹೇಳಿಕೆಯನ್ನು ಸಲ್ಲಿಸಲು ಅನುಮತಿ ನೀಡಿ ಆದೇಶಕ್ಕಾಗಿ ಮುಂದೂಡಲಾಯಿತು. ದಿನಾಂಕ:16.01.2019 ರಂದು ಮಾನ್ಯ ಪ್ರಧಾನ ಕಾರ್ಯದರ್ಶಿಯವರ ನ್ಯಾಯಾಲಯದಲ್ಲಿ ನಡೆದ ವಿಚಾರಣೆಯಲ್ಲಿ ಆಪಾದಿತರಾದ ಶ್ರೀ ಸುರೇಶ್ ರವರ ಹೇಳಿಕೆಯನ್ನು ಪಡೆದಿದ್ದು, ಪ್ರಕರಣವನ್ನು ಆದೇಶಕ್ಕಾಗಿ ಕಾಯ್ದಿರಿಸಿದೆ ಎಂದು ಆದೇಶಿಸಲಾಯಿತು.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43-ಎ(1)(iii) ಸರ್ಕಾರವು, ಗ್ರಾಮ ಪಂಚಾಯತ್‌ನ ಶಿಫಾರಸ್ಸಿನಂತೆ ಅಥವಾ ಅನ್ಯಥಾ ಯಾವೊಬ್ಬ ಸದಸ್ಯನನ್ನು ಅವನನ್ನು ಪಂಚಾಯತ್‌ನ ನಾಲ್ಕು ಒಂದಾದ ಮೇಲೊಂದರಂತೆ ಆದ ಸಭೆಗಳಿಗೆ ಹಾಜರಾಗಲು ತಪ್ಪಿದ್ದರೆ ಅವನಿಗೆ ಅಹವಾಲನ್ನು ಹೇಳಿಕೊಳ್ಳಲು ಅವಕಾಶ ನೀಡಿದ ನಂತರ ಮತ್ತು ಅಗತ್ಯವೆಂದು ತಾನು ಭಾವಿಸಿದಂಥ ವಿಚಾರಣೆ ಮಾಡಿದ ನಂತರ ತೆಗೆದು ಹಾಕುವುದು ಸೂಕ್ತವೆಂದು ಭಾವಿಸಿದ್ದರೆ ಆ ಸದಸ್ಯನನ್ನು ಆತನ ಸದಸ್ಯತ್ವದಿಂದ ತೆಗೆದುಹಾಕಬಹುದು ಎಂದು ಉಲ್ಲೇಖಿಸಲಾಗಿದೆ.

ಸರ್ಕಾರವು, ಲಭ್ಯವಿರುವ ಎಲ್ಲಾ ಸಾಕ್ಷ್ಯಾಧಾರಗಳು, ದಾಖಲಾತಿಗಳು, ಆಪಾದಿತರ ಲಿಖಿತ ಮತ್ತು ಮೌಖಿಕ ಹೇಳಿಕೆಗಳನ್ನು ಪರಿಶೀಲಿಸಿ, ಲಭ್ಯವಿರುವ ಎಲ್ಲಾ ದಾಖಲಾತಿಗಳನ್ನು ಪರಿಶೀಲಿಸಲಾಗಿ, ಶ್ರೀ ಸುರೇಶ್, ಸದಸ್ಯರು, ನಗರನಹಳ್ಳಿ ಗ್ರಾಮ ಪಂಚಾಯಿತಿ, ಹೊಳೆನರಸೀಪುರ ತಾಲ್ಲೂಕು, ಹಾಸನ ಜಿಲ್ಲೆ, ರವರು ಗ್ರಾಮ ಪಂಚಾಯಿತಿಯ ಅನುಮತಿ ಪಡೆಯದೆ ಗ್ರಾಮ ಪಂಚಾಯತಿ ಸಾಮಾನ್ಯ ಸಭೆಗೆ ನಿರಂತರವಾಗಿ ಗೈರು ಹಾಜರಾಗಿರುವ ಆರೋಪವು ಸಾಬೀತಾಗಿರುತ್ತದೆ. ಆದ್ದರಿಂದ ಶ್ರೀ ಸುರೇಶ್, ಸದಸ್ಯರು, ನಗರನಹಳ್ಳಿ ಗ್ರಾಮ ಪಂಚಾಯಿತಿ, ಹೊಳೆನರಸೀಪುರ ತಾಲ್ಲೂಕು, ಹಾಸನ ಜಿಲ್ಲೆ, ಇವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43-ಎ(1)(iii) ರನ್ವಯ ನಗರನಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯ ಸ್ಥಾನದಿಂದ ತೆಗೆದು ಹಾಕಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1382 ಗ್ರಾಪಂಅ 2017.**
**ಬೆಂಗಳೂರು, ದಿನಾಂಕ: 18.03.2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಲಭ್ಯವಿರುವ ಎಲ್ಲಾ ದಾಖಲಾತಿಗಳನ್ನು ಪರಿಶೀಲಿಸಲಾಗಿ, ಗ್ರಾಮ ಪಂಚಾಯಿತಿಯ ಅನುಮತಿ ಪಡೆಯದೆ ದಿನಾಂಕ:03-12-2016, 17-01-2017, 17-02-2017 04-05-2017 ಮತ್ತು 09-08-2017ರಂದು ನಡೆದ ನಗರನಹಳ್ಳಿ ಗ್ರಾಮ ಪಂಚಾಯತಿ ಐದು ಸಾಮಾನ್ಯ ಸಭೆಗಳಿಗೆ ನಿರಂತರವಾಗಿ ಗೈರು ಹಾಜರಾಗಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ಸುರೇಶ್, ಸದಸ್ಯರು, ನಗರನಹಳ್ಳಿ ಗ್ರಾಮ ಪಂಚಾಯಿತಿ, ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43-ಎ(1)(iii) ರನ್ವಯ ಇವರನ್ನು ನಗರನಹಳ್ಳಿ ಗ್ರಾಮ ಪಂಚಾಯಿತಿಯ ಸದಸ್ಯತ್ವ ಸ್ಥಾನದಿಂದ ತಕ್ಷಣದಿಂದ ಜಾರಿಗೆ ಬರುವಂತೆ ತೆಗೆದು ಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
18/3/19
(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1) ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಹಾಸನ ಜಿಲ್ಲಾ ಪಂಚಾಯಿತಿ, ಹಾಸನ ಜಿಲ್ಲೆ.
2) ಕಾರ್ಯನಿರ್ವಾಹಕಾಧಿಕಾರಿ, ಹೊಳೆನರಸೀಪುರ ತಾಲ್ಲೂಕು ಪಂಚಾಯಿತಿ, ಹಾಸನ ಜಿಲ್ಲೆ.

3) ಶ್ರೀ ಸುರೇಶ್, ಸದಸ್ಯರು, ನಗರನಹಳ್ಳಿ ಗ್ರಾಮ ಪಂಚಾಯಿತಿ, ಹೊಳೆನರಸೀಪುರ ತಾಲ್ಲೂಕು, ಹಾಸನ ಜಿಲ್ಲೆ.
4) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ನಗರನಹಳ್ಳಿ ಗ್ರಾಮ ಪಂಚಾಯಿತಿ, ಹೊಳೆನರಸೀಪುರ ತಾಲ್ಲೂಕು, ಹಾಸನ ಜಿಲ್ಲೆ.
5) ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
6) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

ಪ್ರತಿಯನ್ನು ಮಾಹಿತಿಗಾಗಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ನಿರ್ದೇಶಕರು(ಪಂ.ರಾಜ್-1), ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.